# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಎಂ.ಎನ್.ಪಾಟೀಲ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಗಂಗಾವತಿ ಇವರನ್ನು ಅಮಾನತ್ತುಗೊಳಿಸುವ ಬಗ್ಗೆ.

**ಓದಲಾಗಿದೆ:-** ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ. ಮುಇಂ/ಪಂರಾಇಂ ಇ/ಬೆಂ/ಸಿ-11/ತನಿಖೆ-7/2012-13/2918,ದಿನಾಂಕ. 07-07-2012.

**ಪ್ರಸ್ತಾವನೆ:**

ಶ್ರೀ ಎಂ.ಎನ್.ಪಾಟೀಲ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಗಂಗಾವತಿ ಇವರು ರಾಯಚೂರು ಜಿಲ್ಲೆಯ ಸಿಂಧನೂರು ಉಪ ವಿಭಾಗದ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ರಾಜೀವ್‌ಗಾಂಧಿ ಕುಡಿಯುವ ನೀರು ಸರಬರಾಜು ಯೋಜನೆಯಡಿ ಕೇವಲ ಪೈಪ್‌ಲೈನ್‌ಗಾಗಿಯೇ ಕೋಟ್ಯಾಂತರ ಹಣವನ್ನು ಮುಂಗಡವಾಗಿ ನೀಡಿದ್ದಲ್ಲದೇ, ಸದರಿ ಯೋಜನೆಯ ಅಂದಾಜು ಪಟ್ಟಿ ತಯಾರಿಸುವಾಗ ಎರಡು ಪಟ್ಟು ಹೆಚ್ಚಿಗೆ ವೆಚ್ಚವನ್ನು ತೋರಿಸಿರುವುದಾಗಿಯೂ ಹಾಗೂ ಗಂಗಾವತಿ ತಾಲ್ಲೂಕು ಪಂಚಾಯತಿಯ ಅನಿರ್ಬಂಧಿತ ಅನುದಾನ ಕ್ರಿಯಾ ಯೋಜನೆಯಡಿ ನೀಡಲಾದ ರೂ. 100.00 ಗಳನ್ನು ಸಂಪೂರ್ಣವಾಗಿ ಬಳಕೆ ಮಾಡಿಕೊಳ್ಳದೆ ಅನುದಾನವನ್ನು ದುರುಪಯೋಗಪಡಿಸಿಕೊಳ್ಳುವ ದೃಷ್ಟಿಯಿಂದ ಮಾರ್ಚ್ 31ಕ್ಕೆ ಕೇವಲ ರೂ. 31.00 ಲಕ್ಷಗಳನ್ನು ಮಾತ್ರ ವೆಚ್ಚ ಮಾಡಿರುವುದಾಗಿ ಲೆಕ್ಕ ತೋರಿಸಿರುತ್ತಾರೆ. ಅವುಗಳಲ್ಲಿ ಶೌಚಾಲಯ, ಸೋಲಾರ್ ವಿದ್ಯುತ್, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳ ಮೈದಾನ ಅಭಿವೃದ್ಧಿ ಮತ್ತು ಅಂಗನವಾಡಿ ಕಟ್ಟಡಗಳ ವೆಚ್ಚವನ್ನು ತೋರಿಸಿದ್ದು, ವಾಸ್ತವವಾಗಿ ಅಲ್ಲಿ ಯಾವುದೇ ರೀತಿಯ ಕಾಮಗಾರಿಗಳನ್ನು ನಿರ್ವಹಿಸದೆ ಖರ್ಚು ವೆಚ್ಚ ತೋರಿಸಿರುವುದಾಗಿ ಶ್ರೀ ಶಿವರಾಮೇಗೌಡ, ಮಾನ್ಯ ಲೋಕಸಭಾ ಸದಸ್ಯರು, ಕೊಪ್ಪಳ ಇವರು ಸಲ್ಲಿಸಿದ್ದ ದೂರಿನ ಮೇರೆಗೆ ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬಳ್ಳಾರಿ ಇವರು ತನಿಖೆ ನಡೆಸಿ ಈ ಕೆಳಕಂಡಂತೆ ವರದಿ ಸಲ್ಲಿಸಿರುತ್ತಾರೆ:-

| ಕ್ರ.ಸಂ. | ಕಾಮಗಾರಿಗಳ ವಿವರ | ಕಾಮಗಾರಿ ಸಂಖ್ಯೆ | ಪೂರ್ಣಗೊಂಡ ಕಾಮಗಾರಿಗಳು | ನಿರ್ವಹಿಸಿಲ್ಲದ ಕಾಮಗಾರಿಗಳು |
|---|---|---|---|---|
| 1. | ಪ್ರಾಥಮಿಕ ಶಾಲೆಗಳ ನೀರು ಸರಬರಾಜು ಕಾಮಗಾರಿ | 30 | 24 | 06 |
| 2. | ಕವರೇಜ್ ಕಾಮಗಾರಿಗಳು | 88 | 78 | 10 |
| 3. | ಅಂತರ್ಜಲ ಕಾಮಗಾರಿಗಳು | 53 | 52 | 01 |
| 4. | ಮುಖ್ಯ ಮಂತ್ರಿ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆ ಕಾಮಗಾರಿ | 17 | 14 | 03 |
| 5. | ನಬಾರ್ಡ್-XV | 02 | 01 | 01 |
| 6. | ನಬಾರ್ಡ್- XVI | 08 | 01 | 07 ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ |

ಶ್ರೀ ಎಂ.ಎನ್.ಪಾಟೀಲ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಗಂಗಾವತಿ ಇವರು ತಾಲ್ಲೂಕಿನ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ತೃಪ್ತಿಕರವಾಗಿ ಪೂರ್ಣಗೊಳಿಸಿರುವುದಿಲ್ಲ ಹಾಗೂ ವಿಶೇಷವಾಗಿ ಕುಡಿಯುವ ನೀರಿನ ಯೋಜನೆಗಳ ಕಾಮಗಾರಿಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಲ್ಲಿ ವಿಫಲರಾಗಿರುವುದು ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ, ಬಳ್ಳಾರಿ ಇವರು ಸಲ್ಲಿಸಿರುವ ತನಿಖಾ ವರದಿಯಿಂದ ಕಂಡುಬರುತ್ತದೆಯೆಂದು ಮೇಲೆ ಓದಲಾದ ದಿನಾಂಕ. 07-07-2012ರ ಪತ್ರದಲ್ಲಿ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇವರು ವರದಿ ಮಾಡಿರುತ್ತಾರೆ.

ತನಿಖಾ ವರದಿಯನ್ನು ಪರಿಶೀಲಿಸಲಾಗಿ, ಶ್ರೀ ಎಂ.ಎಸ್.ಪಾಟೀಲ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಮುಖ್ಯ ಮಂತ್ರಿಗಳ ಗ್ರಾಮೀಣ ರಸ್ತೆ ಅಭಿವೃದ್ಧಿ ಕಾಮಗಾರಿಗಳಲ್ಲಿ ಮಂಜೂರಾದ ಅನುದಾನ ರೂ. 136.14 ಲಕ್ಷಗಳಲ್ಲಿ ಮಾರ್ಚ್ ಅಂತ್ಯದವರೆಗೆ ರೂ. 95.51 ಲಕ್ಷಗಳ ಪ್ರಗತಿ ಮಾತ್ರ ಸಾಧಿಸಿದ್ದಾರೆ. ನಬಾರ್ಡ್ – XV ರ ಕಾಮಗಾರಿಗಳಿಗೆ ಮಂಜೂರಾದ ರೂ. 111.50 ಲಕ್ಷಗಳ ಪೈಕಿ ರೂ. 76.17 ಲಕ್ಷಗಳ ಆರ್ಥಿಕ ಪ್ರಗತಿ ಮಾತ್ರ ಮಾಡಿರುತ್ತಾರೆ. ನಬಾಡ್ - XVI ರಲ್ಲಿ ಮಂಜೂರಾದ 265.50 ಲಕ್ಷಗಳ ಪೈಕಿ ರೂ. 126.44 ಲಕ್ಷಗಳ ಆರ್ಥಿಕ ಪ್ರಗತಿ ಸಾಧಿಸಿರುತ್ತಾರೆ. ನಿಗದಿತ ಅವಧಿಯಲ್ಲಿ ಸರ್ಕಾರದಿಂದ ಮಂಜೂರಾದ ಅನುದಾನವನ್ನು ವಿನಿಯೋಗಿಸುವಲ್ಲಿ ವಿಫಲರಾಗಿರುವುದು ಕಂಡುಬರುತ್ತದೆ.

ಮೇಲ್ಕಂಡ ಅಂಕಿ ಅಂಶಗಳನ್ನು ಪರಿಶೀಲಿಸಿದಲ್ಲಿ ಈ ಅಧಿಕಾರಿ ವಿವಿಧ ಕಾಮಗಾರಿಗಳಿಗೆ ಖರ್ಚು ಮಾಡಲು ನಿಗದಿಪಡಿಸಿದ ಅನುದಾನವನ್ನು ಖರ್ಚು ಮಾಡುವ ಮೂಲಕ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ವಿಫಲರಾಗಿರುತ್ತಾರೆ. ಆದುದರಿಂದ, ಈ ಅಧಿಕಾರಿಯ ವಿರುದ್ಧ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ ಸದರಿಯವರನ್ನು ಅಮಾನತ್ತಿನಲ್ಲಿಡಲು ನಿರ್ಧರಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

<u>ಆದೇಶ ಸಂಖ್ಯೆ ಗ್ರಾಅಪ 17 ಇಎನ್‌ಕ್ಯೂ 2012, ಬೆಂಗಳೂರು, ದಿನಾಂಕ.22-08-2012</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಮತ್ತು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಗಳು, 1957ರ 10 (1) (ಡಿ) ರಲ್ಲಿ ಪ್ರದತ್ತವಾದ ಅಧಿಕಾರದನ್ವಯ ಶ್ರೀ ಎಂ.ಎಸ್.ಪಾಟೀಲ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಗಂಗಾವತಿ ಇವರ ವಿರುದ್ಧ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ, ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತ್ತುಗೊಳಿಸಿದೆ. ಈ ಅಧಿಕಾರಿಯ ಲೀನ್‌ನನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ ರವರ ಕಚೇರಿಗೆ ವರ್ಗಾಯಿಸಿದೆ.

ಅಮಾನತ್ತಿನ ಅವಧಿಯಲ್ಲಿ ಸದರಿ ಅಧಿಕಾರಿಯು ಸಕ್ಷಮ ಪ್ರಾಧಿಕಾರದ ಅನುಮತಿ ಇಲ್ಲದೇ ಕೇಂದ್ರ ಸ್ಥಾನವನ್ನು ಬಿಡತಕ್ಕದ್ದಲ್ಲ. ಈ ಅಧಿಕಾರಿಯು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 98ರನ್ವಯ ಜೀವನಾಧಾರ ಭತ್ಯೆಗೆ ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

22/8/12
(ಎನ್.ವೈ.ಸಾಗರ),
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ.
5. ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ , (ಸೇ-ಎ ಮತ್ತು ಸಿ)
6. ಶ್ರೀ ಎಂ.ಎಸ್.ಪಾಟೀಲ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಗಂಗಾವತಿ ಇವರಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ ಇವರ ಮುಖಾಂತರ.
7. ಮಾನ್ಯ ಉಪ ಮುಖ್ಯ ಮಂತ್ರಿಗಳ ಆಪ್ತ ಕಾರ್ಯದರ್ಶಿಯವರಿಗೆ.
8. ಗ್ರಾ.ಅ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್)/ ಉಪ ಕಾರ್ಯದರ್ಶಿಯವರು (ಆಡಳಿತ) ಇವರ ಆಪ್ತ ಕಾರ್ಯದರ್ಶಿ/ ಆಪ್ತ ಸಹಾಯಕರಿಗೆ.
9. ಹೆಚ್ಚುವರಿ ಪ್ರತಿ:ರಕ್ಷಾ ಕಡತ : ಕಂಪ್ಯೂಟರ್ ಸೆಲ್.